**<u>ಸಾಕ್ಷಿಯನ್ನು ದಿಃ 19.11.2024 ರಂದು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.</u>**

**<u>ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಕೆ ಎಂ ಟಿ ವಕೀಲರಿಂದ.</u>**

ನಾನು ಖರೀದಿ ಮಾಡಿದ ಸ್ವತ್ತು ವಿಶ್ವನಾಥ್ ಎಂಬುವವರಿಗೆ ವಿಭಾಗದ ಮೂಲಕ ಬಂದಿರುತ್ತದೆ. ನ್ಯಾಯಾಲಯಕ್ಕೆ ಸದರಿ ವಿಭಾಗ ಪತ್ರವನ್ನು ಹಾಜರು ಮಾಡಿರುತ್ತೇನೆ. ನಾನು ಈ ಬಗ್ಗೆ ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ದಾವಾ ಸ್ವತ್ತು ಮತ್ತು ನಿಡಿ-1 ರಲ್ಲಿ ನಮೂದು ಆದ ಆಸ್ತಿಯನ್ನು ನನಗೆ ಮಾರಾಟ ಮಾಡಲು ವಿಶ್ವನಾಥ್ ರವರಿಗೆ ಯಾವುದೇ ಹಕ್ಕು ಇರಲ್ಲಿ ಎಂದರೆ ಸರಿಯಲ್ಲ. ನಾನು ನ್ಯಾಯಾಲಯಕ್ಕೆ ಹಾಜರು ಮಾಡಿದ ನಿಡಿ-1 ರಿಂದ 17 ದಾಖಲೆಗಳನ್ನು ಈ ದಾವೆಗೋಸ್ಕರ ಸೃಷ್ಟಿ ಮಾಡಲಾಗಿದೆ ಎಂದರೆ ಸರಿಯಲ್ಲ. ವಿಶ್ವನಾಥ್ ನನಗೆ ಮಾರಾಟ ಮಾಡಿದ ಸ್ವತ್ತು ಅವರಿಗೆ ಹೇಗೆ ಬಂತು ಎಂದು ತೋರಿಸಲು ನಾನು ನ್ಯಾಯಾಲಯಕ್ಕೆ ಯಾವುದೇ ದಾಖಲೆಯನ್ನು ಹಾಜರು ಮಾಡಿಲ್ಲ ಎಂದರೆ ಸರಿಯಲ್ಲ. ಅಸ್ತಿತ್ವದಲ್ಲಿ ಇಲ್ಲದೇ ಇರುವ ಸ್ವತ್ತುಗಳನ್ನು ಸೇರಿಸಿ ನಿಡಿ-1 ನ್ನು ಸೃಷ್ಟಿ ಮಾಡಿಕೊಂಡಿರುತ್ತೇನೆಂದರೆ ಸರಿಯಲ್ಲ. ನಾನು ಹೇಳಿ ಬರೆಸಿರುವ ಚೆಕ್ಕುಬಂದಿಯಲ್ಲಿ ಯಾವುದೇ ಆಸ್ತಿ ಅಸ್ತಿತ್ವದಲ್ಲಿ ಇಲ್ಲ ಎಂದರೆ ಸರಿಯಲ್ಲ. ನಾನು ಖರೀದಿ ಮಾಡಿದ ಆಸ್ತಿಯ ಮೂಲ ಸ.ನಂ. ನನಗೆ ಗೊತ್ತಿಲ್ಲ. ನಾನು ಖರೀದಿ ಮಾಡಿದ ಆಸ್ತಿಯು ಮೊದಲಿಗೆ ವಿಶ್ವನಾಥ್ ರವರ ಹೆಸರಿನಲ್ಲಿ ಪಹಣಿ ಬರುತ್ತಿದೆ. ಅದಕ್ಕಿಂತ ಮೊದಲು ನಿಡಿ-1 ರಲ್ಲಿ ಇರುವ ಆಸ್ತಿಯ ಪಹಣಿಯಲ್ಲಿ ವಿಶ್ವನಾಥ್ ರವರ ತಂದೆಯ ಹೆಸರು ಬರುತ್ತಿತ್ತು, ಅದಕ್ಕಿಂತ ಮೊದಲು ಯಾರ ಹೆಸರಿನಲ್ಲಿ ಬರುತ್ತಿತ್ತು ಎಂದು ನನಗೆ ಗೂತ್ತಿಲ್ಲ. ನಾನು ಖರೀದಿ ಮಾಡಿದ ಆಸ್ತಿಯನ್ನು ಹೊರತುಪಡಿಸಿ ಈ ಸರ್ವೆ ನಂಬರ್ ಆಸ್ತಿಯಲ್ಲಿ ಏನು ಏನು ಇದೆ ಎಂದು ನನಗೆ ಗೊತ್ತಿಲ್ಲ. ವೈ ಎನ್ ಸಿದ್ದಲಿಂಗಯ್ಯ ನವರ ಬಗ್ಗೆ ನನ್ನ ಪ್ರಮಾಣ ಪತ್ರದಲ್ಲಿ ಸುಳ್ಳು ಬರೆಸಿರುತ್ತೆನೆಂದರೆ ಸರಿಯಲ್ಲ.

ನಾನು ಖರೀದಿ ಮಾಡಿರುವ ಆಸ್ತಿಯಲ್ಲಿ ಲೈಸೆನ್ಸ್ ಪಡೆದಿರುತ್ತೇನೆ. ಸದರಿ ಲೈಸೆನ್ಸ್ ನ್ಯಾಯಾಲಯಕ್ಕೆ ಹಾಜರು ಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಹಾಜರು ಮಾಡಿದ ನಿಡಿ-1 ಮತ್ತು ನಿಡಿ-9 ರಿಂದ 16 ದಾಖಲೆಗಳಿಗೆ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಪಂಚಾಯ್ತಿಯವರೊಂದಿಗೆ ಶಾಮೀಲಾಗಿ ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿಕೊಂಡಿರುತ್ತೇನೆಂದರೆ ಸರಿಯಲ್ಲ. ದಾವೆ ಸಲ್ಲಿಸುವ ಮೊದಲು ವಾದಿಯು ನಾನು

ಸೃಷ್ಟಿಸಿಕೊಂಡ ದಾಖಲೆಯ ಬಗ್ಗೆ ನನ್ನನ್ನು ಸಮಜಾಯಿಷಿ ಕೇಳಿದರೂ ನಾನು ಸರಿಯಾದ ಉತ್ತರ ನೀಡದ ಕಾರಣ ಈ ದಾವೆಯನ್ನು ಹೂಡಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಗಳಲ್ಲಿ ನಾನು ಹೇಳುವ ನಿಡಿ-1 ರಲ್ಲಿ ನಮೂದು ಆಗಿರುವ ಆಸ್ತಿ , ಆಸ್ತಿತ್ವದಲ್ಲಿ ಇಲ್ಲ ಎಂದರೆ ಸರಿಯಲ್ಲ. ಸ.ನಂ. 23/2 ಬಿ-1 ಉಳುಮೆ ಮಾಡುವ ಜಮೀನು ಆಗಿದ್ದು ಅಲ್ಲಿ ಯಾವುದೇ ಮನೆಗಳು ಇಲ್ಲ ಎಂದರೆ ಸರಿಯಲ್ಲ. ವಾದಿಗೆ ನಾವು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ತೊಂದರೆ ಮಾಡಿದ್ದರಿಂದ ಈ ದಾವೆಯನ್ನು ಸಲ್ಲಿಸಿರುತ್ತಾರೆ ಎಂದರೆ ಸರಿಯಲ್ಲ. ನಿಡಿ-1 ರಿಂದ 16 ದಾಖಲೆಗಳನ್ನು ವಜಾ ಮಾಡುವುದರಿಂದ ನನಗೆ ಯಾವುದೇ ತೊಂದರೆ ಇಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)
ಓ.ಹೇ.ಕೇ. ಸರಿ ಇದೆ

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ
ಕುಣಿಗಲ್.